ಛೇರ್ಮನ್.— ಪ್ರಸ್ತಾವ ಏನೆಂದರೆ:

" That in clause 13, serial No. (i) shall be renumbered as Serial No. (ii) and b fore the serial No. (ii) as so renumberd the following shall be substituted, namely:

" (i) (a) in serial No. 1, in column (2), for the words 'Fenny and beer", the words "and Fenny" shall be substituted, and (b) serial number (2) and the entries thereto, shall be omitted " (b) serial number (2) and the entries there to shall be omitted."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ೧೩ ತಿದ್ದುಪಡಿಯಾದ ರೀತಿಯಲ್ಲಿ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಛೇರ್ಮನ್: ಪ್ರಸ್ತಾವ ಏನೆಂದರೆ " ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವನ್ನು ಅಂಗೀಕರಿಸಲಾಯಿತು

ಮೊದಲನೇ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪಮೊಯಿಲಿ (ಮಾನ್ಯ ಕಾನೂನು, ವಾರ್ತಾ ಹಾಗೂ ಪ್ರವಾಸೋದ್ಯಮ ಮಂತ್ರಿಗಳು).—"೧೯೯೦ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯಾಗಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ."

ಛೇರ್ಮನ್: ಪ್ರಸ್ತಾವ ಏನೆಂದರೆ .. ೧೯೯೦ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

೨-೧೦ ಪಿ. ಎಂ.

೧೯೯೦ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಯೋಜನೆ, ವಾರ್ತಾ, ಪ್ರವಾಸೋದ್ಯಮ, ಯುವಜನ ಸೇವೆಗಳು ಮತ್ತು ಕೈಗಾರಿಕಾ ಮಂತ್ರಿಗಳು).— ಮಾನ್ಯ ಅಧ್ಯಕ್ಷರೇ, ಮಾನ್ಯ ಹಣಕಾಸು ಸಚಿವರ ಪರವಾಗಿ '೧೯೯೦ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕ' ವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಛೇರ್ಮನ್.— ಪ್ರಸ್ತಾವ ಏನೆಂದರೆ ''೧೯೯೦ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ರಿಂದ ೫ರವರೆಗೆ

ಚೇರ್ಮನ್.—ಪ್ರಸ್ತಾವ ಏನೆಂದರೆ "ಖಂಡ ೨ರಿಂದ ೫ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ರಿಂದ ೫ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಚೇರ್ಮನ್.— ಪ್ರಸ್ತಾವ ಏನೆಂದರೆ ''ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವನೆಯನ್ನು ಅಂಗೀಕರಿಸಲಾಯಿತು

ಮೊದಲನೇ, ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು, ಸಂಸದೀಯ ವ್ಯವಹಾರಗಳು, ಯೋಜನೆ ವಾರ್ತಾ, ಪ್ರವಾಸೋದ್ಯಮ ಯುವಜನ ಸೇವೆಗಳು ಹಾಗೂ ಕೈಗಾರಿಕಾ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ ೧೯೯೦ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಚೇರ್ಮನ್.— ಪ್ರಸ್ತಾವ ಏನೆಂದರೆ ೧೯೯೦ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಜಿ. ಪುಟ್ಟಸ್ವಾಮಿಗೌಡ (ನೀರಾವರಿ ಮತ್ತು ಲೋಕೋಪಯೋಗಿ ಸಚಿವರು).— ಮಾನ್ಯ ಅಧ್ಯಕ್ಷರೇ, ''೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ) ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು